ಅ) 1996-97ನೇ ಸಾಲಿನಲ್ಲಿ ಸಾಧಿಸಿದ ಪ್ರಗತಿಗೆ ಅನುಗುಣವಾಗಿ 1997-98ನೇ ಸಾಲಿನಲ್ಲಿ 597 ಅಧಿಕಾರಿಗಳಿಗೆ ಹಾಗೂ 1432 ನೌಕರರುಗಳಿಗೆ ಪ್ರೋತ್ಸಾಹಕ ಬಹುಮಾನ ಮಂಜೂರು ಮಾಡಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಅಕಾಡೆಮಿಗಳು

1763 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಪ್ರವಾಸೋದ್ಯಮ, ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವೆಯರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿರುವ ಅಕಾಡೆಮಿಗಳ ಸಂಖ್ಯೆ ಎಷ್ಟು?

ಆ) ಈ ಅಕಾಡೆಮಿಗಳು ಯಾವುವು ಹಾಗೂ 1997-98ರಲ್ಲಿ ಈ ಅಕಾಡೆಮಿಗಳಿಗೆ ಸರ್ಕಾರ ನೀಡಿದ ಅನುದಾನವೆಷ್ಟು?

ಇ) ಈ ಎಲ್ಲಾ ಅಕಾಡೆಮಿಗಳನ್ನು ರದ್ದುಗೊಳಿಸಿ ಇವುಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿಯಲ್ಲಿ ತರಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀಮತಿ ಲೀಲಾದೇವಿ. ಆರ್. ಪ್ರಸಾದ್ (ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವೆಯರು) :

ಅ) 10

ಆ) 1. ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು ರೂ. 19.17 ಲಕ್ಷ

2. ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ರೂ. 18.08 ಲಕ್ಷ

3. ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಬೆಂಗಳೂರು ರೂ. 18.37 ಲಕ್ಷ

4. ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ, ಬೆಂಗಳೂರು ರೂ. 17.10 ಲಕ್ಷ

5. ಕರ್ನಾಟಕ ಲಲಿತ ಕಲಾ ಅಕಾಡೆಮಿ, ಬೆಂಗಳೂರು ರೂ. 18.37 ಲಕ್ಷ

6. ಕರ್ನಾಟಕ ಶಿಲ್ಪ ಕಲಾ ಅಕಾಡೆಮಿ, ಬೆಂಗಳೂರು ರೂ. 18.80 ಲಕ್ಷ

7. ಕರ್ನಾಟಕ ಉರ್ದು ಅಕಾಡೆಮಿ, ಬೆಂಗಳೂರು ರೂ. 18.82 ಲಕ್ಷ

8. ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ, ಮಡಿಕೇರಿ ರೂ. 11.00 ಲಕ್ಷ

9. ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ, ಮಂಗಳೂರು ರೂ. 11.00 ಲಕ್ಷ

10. ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ, ಮಂಗಳೂರು ರೂ. 11.00 ಲಕ್ಷ

ಇ) ಇಲ್ಲಾ.

ಹೊಸೂರು ರಸ್ತೆಯಲ್ಲಿರುವ ಕೈಗಾರಿಕಾ ತರಬೇತಿ ಕೇಂದ್ರ ಆವರಣದಲ್ಲಿ ಕಟ್ಟಡ ನಿರ್ಮಾಣ

1764 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹೊಸೂರು ರಸ್ತೆಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರದ ವಶದಲ್ಲಿರುವ ಜಾಗವೆಷ್ಟು?*

ಆ) *ಈ ಜಾಗದಲ್ಲಿ ಕೈಗಾರಿಕಾ ತರಬೇತಿ ಕೇಂದ್ರಕ್ಕಾಗಿ ಹೆಚ್ಚುವರಿ ಕಟ್ಟಡ ನಿರ್ಮಿಸಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ?*

ಶ್ರೀ ಬಿ. ಸತ್ಯನಾರಾಯಣ (ಕಾರ್ಮಿಕ ರಾಜ್ಯ ಸಚಿವರು) :

ಅ) 19.35 ಎಕರೆಗಳು.

ಆ) ಇಲ್ಲ.

ಮನರಂಜನಾ ತೆರಿಗೆಯಿಂದ ಸರ್ಕಾರಕ್ಕೆ ಬಂದ ಆದಾಯ

1765 - ಶ್ರೀ ಎಸ್. ರಾಜೇಂದ್ರನ್ (ಕೆ.ಜಿ.ಎಫ್) : ಮಾನ್ಯ ಉಪಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮನರಂಜನಾ ತೆರಿಗೆಯಿಂದ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ?*

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :

ಅ)

ವರ್ಷ	ತೆರಿಗೆ ಸಂಗ್ರಹಣೆ
	(ರೂ. ಕೋಟಿಗಳಲ್ಲಿ)
1995-96	45.05
1996-97	34.20
1997-98	47.75